ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಅನುದಾನಿತ ಪದವಿ ಕಾಲೇಜುಗಳಲ್ಲಿನ ಖಾಲಿ ಹುದ್ದೆ ಭರ್ತಿ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-

793 (975) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅನುದಾನಿತ ಪದವಿ ಕಾಲೇಜುಗಳಲ್ಲಿ ನಿವೃತ್ತಿ, ರಾಜೀನಾಮೆ ಇನ್ನಿತರೆ ಕಾರಣÀಗಳಿಂದ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಅನುಮೋದನೆ ನೀಡಿದೆಯೇ ;

(ಆ) ಸದರಿ ಹುದ್ದೆಗಳನ್ನು ಭರ್ತಿ ಮಾಡÀಲು ಸರ್ಕಾರದ ಹಂತಕ್ಕೆ ಬಂದಿರುವ ಕಡತಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಸದರಿ ಕಡತಗಳಿಗೆ ಆರ್ಥಿಕ ಇಲಾಖೆಯಿಂದ ಅನುಮೋದನೆ ನೀಡಲು ತಡೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಾದಲ್ಲಿ, ತಡೆಹಿಡಿಯಲು ಕಾರಣಗಳೇನು ; (ವಿವರ ನೀಡುವುದು)

(ಉ) ಯಾವ ಕಾಲಮಿತಿಯಲ್ಲಿ ಸದರಿ ಕಡತಗಳಿಗೆ ಅನುಮೋದನೆ ನೀಡಲಾಗುವುದು ?